**All India Radio: Bangalore**
**Regional Bulletin In Kannada**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

**11.12.2025** **6.40 p.m.**

*******************

ಮುಖ್ಯಾಂಶಗಳು

- ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸದೃಢವಾಗಿದೆ- ಮೇಲ್ಮನೆಯಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸಮರ್ಥನೆ
- ಅಂತಾರಾಷ್ಟ್ರೀಯ ಕ್ರೀಡಾಪಟುಗಳಿಗೆ ಸರ್ಕಾರಿ ಉದ್ಯೋಗ ನೀಡಲು ಸರ್ಕಾರ ಬದ್ಧ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಬೆಳಗಾವಿಯಲ್ಲಿಂದು ಸಚಿವ ಸಂಪುಟ ಸಭೆ; ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಪಂದ್ಯಾವಳಿ ಆಯೋಜಿಸುವ ಕುರಿತಂತೆ ಚರ್ಚೆ
- ಸರ್ಕಾರಿ ಆಸ್ಪತ್ರೆ ಆವರಣದಲ್ಲಿ ಜನೌಷಧಿ ಕೇಂದ್ರ ಮುಚ್ಚುವ ಆದೇಶ ರದ್ದುಗೊಳಿಸಿದ ಹೈಕೋರ್ಟ್
- ದ್ವೇಷ ಭಾಷಣ ನಿಯಂತ್ರಣ ವಿಧೇಯಕ ಅಸಂವಿಧಾನಿಕ- ಬಿಜೆಪಿ ಅಸಮಾಧಾನ

***************

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಅತ್ಯಂತ ಸದೃಢವಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ವಿಧಾನಪರಿಷತ್ತಿನಲ್ಲಿಂದು ಪ್ರಶ್ನೋತ್ತರ ಕಲಾಪದಲ್ಲಿ ಉತ್ತರಿಸಿದ ಅವರು, ಕಳೆದ ಮೂರು ತಿಂಗಳಿನಿಂದ ರಾಜ್ಯದಲ್ಲಿ ಯಾವುದೇ ಅಹಿತಕರ ಘಟನೆ ನಡೆದಿಲ್ಲ ಎಂದು ತಿಳಿಸಿದ್ದಾರೆ.

ಬೇರೆ ರಾಜ್ಯಗಳಲ್ಲಿ ಪೊಲೀಸರು, ಗನ್ ಹಿಡಿದು ಕರ್ತವ್ಯ ನಿರ್ವಹಣೆ ಮಾಡುತ್ತಿದ್ದು, ರಾಜ್ಯದಲ್ಲಿ ಅಂತಹ ಪರಿಸ್ಥಿತಿ ಇಲ್ಲ ಎಂದು ಸಮರ್ಥಿಸಿಕೊಂಡಿದ್ದಾರೆ. ಕರಾವಳಿಯಲ್ಲಿ ವಿಶೇಷ ಕಾರ್ಯಪಡೆ ರಚಿಸಿದ ಬಳಿಕ ಯಾವುದೇ ಅಹಿತಕ ಘಟನೆ ನಡೆದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ರಾಜ್ಯದಲ್ಲಿ ಮಾದಕ ವಸ್ತುಗಳ ನಿಯಂತ್ರಣ ಆಗುವವರೆಗೆ ದಂದೆಕೋರರ ವಿರುದ್ಧ ಸಮರ ನಡೆಯಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

***************

ಪ್ರಮುಖ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಅದ್ವಿತೀಯ ಸಾಧನೆ ಮಾಡಿರುವ ಕ್ರೀಡಾಪಟುಗಳಿಗೆ ಸರ್ಕಾರಿ ಉದ್ಯೋಗ ನೀಡಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಪರಿಷತ್‌ನಲ್ಲಿ ಸ್ಪಷ್ಟಪಡಿಸಿದ್ದಾರೆ.

ಆಡಳಿತ ಪಕ್ಷದ ಶಾಸಕ ಐವಾನ್ ಡಿಸೋಜಾ ಅವರ ಪ್ರತ್ಯೇಕ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ, ಈಗಾಗಲೇ ೧೩ ಮಂದಿ ಕ್ರೀಡಾ ಸಾಧಕರಿಗೆ ಸರ್ಕಾರಿ ಉದ್ಯೋಗ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಪೊಲೀಸ್ ಇಲಾಖೆ ಮತ್ತು ಅರಣ್ಯ ಇಲಾಖೆಯಲ್ಲಿ ಸಾಧನೆಗೈದ ಕ್ರೀಡಾಪಟುಗಳಿಗೆ ಉದ್ಯೋಗ ನೇಮಕಾತಿಯಲ್ಲಿ ಶೇಕಡಾ ಮೂರರಷ್ಟು ಮೀಸಲಾತಿ ಸೌಲಭ್ಯ ಕಲ್ಪಿಸಲಾಗಿದೆ. ಉಳಿದ ಇಲಾಖೆಗಳಲ್ಲಿ ಶೇಕಡ ಎರಡರಷ್ಟು ಮೀಸಲಾತಿ ನೀಡಲು ತೀರ್ಮಾನಿಸಲಾಗಿದೆ ಎಂದು ಹೇಳಿದ್ದಾರೆ.

***************

ರಾಜ್ಯಾದ್ಯಂತ ಇರುವ ೩ ಲಕ್ಷದ ೩೦ ಸಾವಿರ ಹೆಕ್ಟೇರ್ ಡೀಮ್ಡ್ ಫಾರೆಸ್ಟ್ ಕುರಿತು ಆರು ತಿಂಗಳಲ್ಲಿ ವರದಿ ನೀಡುವಂತೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ವಿಧಾನಸಭೆಯಲ್ಲಿ ತಿಳಿಸಿದ್ದಾರೆ.,

ಎಸ್.ಎನ್.ನಾರಾಯಣಸ್ವಾಮಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಡೀಮ್ಡ್ ಫಾರೆಸ್ಟ್ ವಿಷಯಕ್ಕೆ ಸಂಬಂಧಿಸಿದಂತೆ ಕಂದಾಯ ಸಚಿವರೊಂದಿಗೆ ಈಗಾಗಲೇ ಒಂದು ಸುತ್ತಿನ ಚರ್ಚೆ ನಡೆಸಲಾಗಿದೆ. ಕಂದಾಯ ಇಲಾಖೆ ಜೊತೆಗೆ ಸೇರಿ ಜಂಟಿ ಸರ್ವೆ ನಡೆಸಿದ ಬಳಿಕ ಡೀಮ್ಡ್ ಅರಣ್ಯ ಭೂಮಿಯ ಬದಲಿಗೆ ಕಂದಾಯ ಭೂಮಿ ನೀಡಿದರೆ ಸಮಸ್ಯೆ ಬಗೆಹರಿಯಲಿದೆ ಎಂದು ಸ್ಪಷ್ಟನೆ ನೀಡಿದ್ದಾರೆ.

ಸದಸ್ಯರಾದ ಅರಗ ಜ್ಞಾನೇಂದ್ರ, ಸುನೀಲ್ ಕುಮಾರ್, ಸಿ ಸಿ ಪಾಟೀಲ್ ಅವರು ಮಾತನಾಡಿ ಇದು ತುಂಬಾ ಹಳೆಯ ಸಮಸ್ಯೆಯಾಗಿದೆ. ಆದಷ್ಟು ಶೀಘ್ರವಾಗಿ ಈ ಸಮಸ್ಯೆ ಬಗೆಹರಿಸಲು ಕಾಲಮಿತಿಯೊಳಗೆ ಕ್ರಮಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

***************

ರಾಜ್ಯದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಪರಿಷ್ಕೃತ ಪಠ್ಯಕ್ರಮದ ಅನುಸಾರ ಯಂತ್ರೋಪಕರಣಗಳನ್ನು ಖರೀದಿಸಿ ಒದಗಿಸಲು ೫೦ ಕೋಟಿ ರೂಪಾಯಿ ಅನುದಾನ ಒದಗಿಸಿದ್ದು, ಈಗಾಗಲೆ ಟೆಂಡರ್ ಪ್ರಕ್ರಿಯೆ ನಡೆದಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.

ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಇಂದು  ಮಾತನಾಡಿದ ಅವರು, ರಾಜ್ಯದ ೯೦ ಸರ್ಕಾರಿ ಐಟಿಐ ಗಳಲ್ಲಿ ಡಿ.ಜಿ.ಟಿ. ನವದೆಹಲಿ ಅವರ ಪರಿಷ್ಕೃತ ಪಠ್ಯಕ್ರಮದ ಅನುಸಾರ ಅಗತ್ಯವಿರುವ ಯಂತ್ರೋಪಕರಣಗಳನ್ನು ಒದಗಿಸಲು ಈಗಾಗಲೆ ಟೆಂಡರ್ ಕರೆಯಲಾಗಿದೆ ಸ್ಪಷ್ಟಪಡಿಸಿದ್ದಾರೆ.

***************

ಬೆಳಗಾವಿಯಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಸಭೆ ನಡೆಯಲಿದೆ.

ಪ್ರಮುಖವಾಗಿ ಇಂದಿನ ಸಭೆಯಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯ ಸೇರಿದಂತೆ ಎಲ್ಲಾ ಪಂದ್ಯಾವಳಿಗಳನ್ನು ಆಯೋಜಿಸುವ ಕುರಿತಂತೆ ಮಹತ್ವದ ನಿರ್ಧಾರ ಕೈಗೊಳ್ಳುವ ಸಾಧ್ಯತೆಯಿದೆ. ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದ ಅನಧಿಕೃತ ಬಡಾವಣೆಯ ಸ್ವತುಗಳಿಗೆ ಎ-ಖಾತಾ ನೀಡುವ ಕುರಿತು ಚರ್ಚೆ ನಡೆಯಲಿದೆ.

ಜೊತೆಗೆ ದ್ವೇಷ ಭಾಷಣ ಹಾಗೂ ದ್ವೇಷದ ಅಪರಾಧ ತಡೆ ವಿಧೇಯಕ-೨೦೨೫ ಕುರಿತಂತೆ ಚರ್ಚೆ ನಡೆಯುವ ಸಾಧ್ಯತೆಯಿದೆ.

***************

ರಾಜ್ಯಾದ್ಯಂತ ಸರ್ಕಾರಿ ಆಸ್ಪತ್ರೆ ಆವರಣದಲ್ಲಿ ಕಾರ್ಯ ನಿಯಂತ್ರಿಸುತ್ತಿರುವ ಜನೌಷಧಿ ಕೇಂದ್ರಗಳನ್ನು ಮುಚ್ಚುವಂತೆ ಸರ್ಕಾರ ಹೊರಡಿಸಿದ್ದ ಆದೇಶವನ್ನು ಉಚ್ಚ ನ್ಯಾಯಾಲಯ ರದ್ದುಗೊಳಿಸಿದೆ.

ನ್ಯಾಯಮೂರ್ತಿ ಎಂ.ನಾಗಪ್ರಸನ್ನ ನೇತೃತ್ವದ ಪೀಠ ಸರ್ಕಾರದ ಕ್ರಮ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿ ಈ ಆದೇಶ ನೀಡಿದ್ದಾರೆ. ಈ ಕುರಿತಂತೆ ಪ್ರತಿಕ್ರಿಯಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಜನೌಷಧಿ ಕೇಂದ್ರದಲ್ಲಿ ಬಡವರಿಗೆ ಕೈಗೆಟುಕುವ ದರದಲ್ಲಿ ಔಷಧಿಗಳು ಸಿಗುತ್ತಿವೆ.  ಆದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಿಯವರ ಜನಪ್ರಿಯತೆ ಸಹಿಸದೆ ಈ ನಿರ್ಧಾರ ಕೈಗೊಂಡಿದ್ದಾರೆ ಎಂದು ದೂರಿದ್ದಾರೆ.

***************

ರಾಜ್ಯ ಸರ್ಕಾರದ ದ್ವೇಷ ಭಾಷಣದ ನಿಯಂತ್ರಣಾ ವಿಧೇಯಕ ಅಸಂವಿಧಾನಿಕ ಎಂದು ಬಿಜೆಪಿ ಆರೋಪಿಸಿದೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಇದು ಕಾನೂನು ವಾಕ್ ಸ್ವಾತಂತ್ರ್ಯ ಮತ್ತು ವೈಯಕ್ತಿಕ ಸ್ವಾತಂತ್ರ್ಯವನ್ನು ಮೊಟಕುಗೊಳಿಸಲಿದೆ ಎಂದು ದೂರಿದ್ದಾರೆ.

ದ್ವೇಷ ಭಾಷಣ ತಡೆಯಲು ಈಗಾಗಲೇ ಸಾಕಷ್ಟು ಕಾನೂನುಗಳು ಇವೆ. ಆದರೆ, ಸರ್ಕಾರ ತಮ್ಮ ಪಕ್ಷದ ವಿರುದ್ಧ ಮಾತನಾಡುವವರನ್ನು ಜೈಲಿಗೆ ಕಳುಹಿಸಲು ಸಂಚು ರೂಪಿಸುತ್ತಿದೆ ಎಂದು ಆರೋಪಿಸಿದ್ದಾರೆ.

***************

ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಪ್ರಕರಣಗಳ ವಿಚಾರಣೆಯನ್ನು ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯದಿಂದ ಬೇರೆ ಸೆಷನ್ಸ್ ನ್ಯಾಯಾಲಯಕ್ಕೆ ವರ್ಗಾಯಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ತಿರಸ್ಕರಿಸಿದೆ.

ಮುಖ್ಯ ನ್ಯಾಯಾಮೂರ್ತಿ ಸೂರ್ಯಕಾಂತ್ ಮತ್ತು ಜೋಯ್ಮಾಲ್ಯ ಬಾಗ್ಚಿ ಪೀಠವು ವಿಚಾರಣಾ ನ್ಯಾಯಾಧೀಶರು ಪೂರ್ವಾಗ್ರಹ ಪೀಡಿತರಾಗಿದ್ದಾರೆ ಎಂಬ ವಾದವನ್ನು ತಳ್ಳಿಹಾಕಿದೆ.

ಅಗತ್ಯವಿದ್ದರೆ, ಉಚ್ಚ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಲು ಪ್ರಜ್ವಲ್ ರೇವಣ್ಣಗೆ ಅನುಮತಿ ನೀಡಿದೆ.

***************

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಇತ್ತೀಚೆಗೆ ನಡೆಸಿದ "ಪಿಎಚ್.ಡಿ ಕೋರ್ಸ್ ವರ್ಕ್ ಪರೀಕ್ಷೆಯ  ಫಲಿತಾಂಶವನ್ನು ವಿದ್ಯಾರ್ಥಿಗಳ ಮೊಬೈಲ್ ಸಂಖ್ಯೆಗೆ ರವಾನಿಸುವ ಮೂಲಕ ಹೊಸ ತಂತ್ರಜ್ಞಾನ ಪದ್ಧತಿಯನ್ನು ಅವಳಡಿಸಿಕೊಂಡಿದೆ.

ಪಿಎಚ್.ಡಿ ಕೋರ್ಸ್ ವರ್ಕ್ ಪರೀಕ್ಷೆಯ ವಿಷಯವಾರು ವಿಭಾಗಗಳಲ್ಲಿ ೩ ಸಾವಿರದ ೯೧೩ ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದು, ಎಲ್ಲಾ ವಿದ್ಯಾರ್ಥಿಗಳಿಗೆ ನೋಂದಾಯಿಸಿದ್ದ ಮೊಬೈಲ್ ಸಂಖ್ಯೆಗೆ ಫಲಿತಾಂಶವನ್ನು ಬಿಡುಗಡೆ ಮಾಡಿದೆ. ಈ ವೇಳೆ ಅಂಕಪಟ್ಟಿಯ ಲಿಂಕ್ ಸಹ ನೀಡಲಾಗಿದ್ದು, ವಿದ್ಯಾರ್ಥಿಗಳು ಸುಲಭವಾಗಿ ಲಿಂಕ್ ಕ್ಲಿಕ್ ಮಾಡಿ ಅಂಕಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

***************

ಮಂಡ್ಯ ನಗರದ ವ್ಯಾಪ್ತಿಗೆ ಬರುವ ರೈತರ ಸಹಭಾಗಿತ್ವ ೫೦:೫೦ರ ಅನುಪಾತದಲ್ಲಿ ಜಂಟಿ ಉದ್ಯಮದೊಂದಿಗೆ ಬಡಾವಣೆಗಳ ಅಭಿವೃದ್ಧಿಪಡಿಸುವ ಮೂಲಕ ನಿವೇಶನರಹಿತರಿಗೆ ನಿವೇಶನ ಹಾಗೂ ನಗರ ಅಭಿವೃದ್ಧಿಗೆ ಕ್ರಮ ವಹಿಸಲಾಗುವುದು ಎಂದು ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಿ.ಪಿ.ಪ್ರಕಾಶ್ ತಿಳಿಸಿದ್ದಾರೆ.

ಮಂಡ್ಯ ನಗರದ ಮುಡಾ ಕಚೇರಿ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಹೊಸಚೈತನ್ಯ ತುಂಬುವ ನಿಟ್ಟಿನಲ್ಲಿ ಮಂಡ್ಯ ನಗರಾಭಿವೃದ್ಧಿಗೆ ಒತ್ತುವ ನೀಡುವ ಮೂಲಕ ಮಹತ್ವಾಕಾಂಕ್ಷೆ ಯೋಜನೆ ಆರಂಭಿಸಲು ಚಿಂತನೆ ನಡೆಸಲಾಗಿದೆ ಎಂದು ಹೇಳಿದ್ದಾರೆ.

***************

ಇದೇ ೨೧ ರಂದು ರಾಜ್ಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮೈಸೂರು ಜಿಲ್ಲೆಯಾದ್ಯಂತ ೫ ವರ್ಷದೊಳಗಿನ ಪ್ರತಿ ಮಗುವಿಗೆ ತಪ್ಪದೆ ಪಲ್ಸ್ ಪೋಲಿಯೋ ಲಸಿಕೆ ಹಾಕಿಸುವಂತೆ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದ್ದಾರೆ.

ಬೆಳಗ್ಗೆ ೮ ರಿಂದ ಸಂಜೆ ೫ ಗಂಟೆಯವರೆಗೆ ಬೂತ್ ಮಟ್ಟದಲ್ಲಿ ಲಸಿಕೆ ನೀಡಲಾಗುತ್ತದೆ. ಇದೇ ೨೨ ರಿಂದ ೨೪ ರವರೆಗೆ ಮನೆ ಮನೆಗೆ ಭೇಟಿ ನೀಡಿ ಲಸಿಕೆ ನೀಡುವ ಕಾರ್ಯ ಹಮ್ಮಿಕೊಳ್ಳಲಾಗಿದೆ. ಇದೇ ೨೧ ರಿಂದ ೨೪ ರವರೆಗೆ ೪ ದಿನಗಳು ಸಂಚಾರ ಕೇಂದ್ರಗಳು ಹಾಗೂ ಹೆಚ್ಚಿನ ಅಪಾಯ ಪ್ರದೇಶಗಳಲ್ಲಿ ವಿಶೇಷ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಕೊಡಗು  ಜಿಲ್ಲೆಯಲ್ಲಿಯೂ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರು ಸೂಚಿಸಿದ್ದಾರೆ.

ಗದಗ ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ೫ ವರ್ಷದೊಳಗಿನ ಪ್ರತಿ ಮಗುವಿಗೆ ತಪ್ಪದೆ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ ತಿಳಿಸಿದ್ದಾರೆ.

***************

ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಎಫ್ಎಕ್ಯೂ ಗುಣಮಟ್ಟದ ಮೆಕ್ಕೆಜೋಳ ಖರೀದಿಸಲು ಜಿಲ್ಲೆಯಾದ್ಯಂತ ಖರೀದಿ ಕೇಂದ್ರಗಳನ್ನು ಸ್ಥಾಪನೆ ಮಾಡಲಾಗಿದೆ. ಬೆಳೆಗಾರರು ಇದರ ಸದುಪಯೋಗ ಪಡೆಯಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯಲ್ಲಿ ೧೬೬ ಹೇಕ್ಟರ್ ಪ್ರದೇಶದಲ್ಲಿ ಮೆಕ್ಕೆಜೋಳ ಬಿತ್ತನೆ ಮಾಡಲಾಗಿದೆ. ಪ್ರತಿ ಕ್ವಿಂಟಲ್ ಗೆ ೨ ಸಾವಿರದ ೪೦೦ ರೂಪಾಯಿ ಕೊಟ್ಟು ಖರೀದಿಸಲು ಕೋರ್ ಗ್ರೀನ್ ಶುಗರ್ ಆಂಡ್ ಫ್ಯೂಯೆಲ್ಸ್ ಪ್ರೈವೇಟ್ ಲಿಮಿಟೆಡ್‌ಗೆ ನಿರ್ದೇಶನ ನೀಡಲಾಗಿದೆ ಎಂದು ಪ್ರಕಟಣೆಯಲ್ಲಿ ಹೇಳಿದ್ದಾರೆ.

***************

ಕೋಲಾರ ಜಿಲ್ಲೆಯಲ್ಲಿ ಡಿಸೆಂಬರ್ ೧ ರಿಂದ ಹೆಲ್ಮೆಟ್ ಕಡ್ಡಾಯಗೊಳಿಸಿದ್ದು, ಸುಮಾರು ೨ ಸಾವಿರದ ೫೦೦ ಪ್ರಕರಣಗಳನ್ನು ದಾಖಲಿಸಿ ೮ ಲಕ್ಷ ರೂಪಾಯಿ ದಂಡ ವಿಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ ನಿಖಿಲ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರ್ವಜನಿಕರ ಸುರಕ್ಷತೆ ಕಾಪಾಡುವುದು ನಮ್ಮ ಕರ್ತವ್ಯವಾಗಿದೆ. ಜಿಲ್ಲೆಯಲ್ಲಿ ಶೇಕಡ ೭೫ ರಷ್ಟು ಜನತೆ ಹೆಲ್ಮೆಟ್ ಧರಿಸುವ ಮೂಲಕ ಸಹಕರಿಸಿದ್ದಾರೆ. ಆದರೆ ಉಳಿದ ಶೇಕಡ ೨೫ ರಷ್ಟು ಜನ ಹೆಲ್ಮೆಟ್ ಹಾಕುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

*******ಮುಕ್ತಾಯ*******